ಕಡೂರು ಡಿಸ್ಟ್ರಿಕ್ಟು.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

1. ಕಂದಾಯದ ಬಾಕೀದಾರರಾದ ತರೀಕೆರೆ ತಾಲ್ಲೂಕು ಕೆಳಗಿನ ಇದ್ದರಬೈಲ್ ಎಸ್ಟೇಟ್ ಮೆ॥ ಡೇವಿಡ್ ಹೆನ್ರಿಕೋರ್ಡಲಿಸ್ ಸಾಹೇಬರವರಿಂದ ತಿಗಡಾ ಗ್ರಾಮಕ್ಕೆ ಬರಬೇಕಾದ ಜಮೀರ್ ಕಂದಾಯ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಕಡೂರು ಡಿಸ್ಟ್ರಿಕ್ಟು ತರೀಕೆರೆ ತಾಲ್ಲೂಕು ನಂದಿಬಟ್ಟು ಗ್ರಾಮದಲ್ಲಿ 1907ನೆ ಇಸವಿ ಮಾರ್ಚಿ ನೋನುವಾರ 11ನೆ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟಿದೆ.

ಹರಾಜು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಜಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1903-04—1904-05—1905-06ನೆ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ಡಿಪ್ಯೂಲ್ ಮೈರಿಗೆ ರೂ. 329-7-9 ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಕೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕೀ ಮೊಬಲಗು ಹರಾಜ್ ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನು ಹಾಜರ್ಮಾಡಿದವನು ಕಳಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕೀ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೂಲಕ ಹರಾಜುದಾರನ ಖರ್ಚಿನಿಂದಲೂ ನುತ್ತು ಅವನಿಗೆ ಆದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೆ ಯಾ ಏಜಂಟು ಯಾ ಮುಖ್ತಾರೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನು ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುಖ್ತಾರೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನು ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲೀ ಆತನ ತರಫು ನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲೀ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಋಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯೂಟಿ ಕಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದಮೇಲೆ ಡೆಪ್ಯೂಟಿ ಕಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಸ್ಟರಿ ಮಾಡಲ್ಪಟ್ಟು ಡೆಪ್ಯೂಟಿ ಕಮಿಷನರವರಿಂದ ಸೈ ಮೊಹರಿ ಮಾಡಲ್ಪಟ್ಟ ಒಂದು ಹರಾಜ್ ಸರಟಿಫಿಕೇಟು ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ವಗಳಿಗೆ ಗವರ್ಮೆಂಟಿನವರು ಜವಾಬ್ದಾರರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯಿತು 30 ದಿವಸಗಳಲ್ಲಿ ಡೆಪ್ಯೂಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು: —

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕೀದಾರರ ಹೆಸರು.	ಸ್ವತ್ತಿನ ವಿವರ. ಕಟ್ಟಡಗಳು. ಕಟ್ಟಡದ ಹೆಸರು.	ಕಟ್ಟಡದ ಅಂದಾಜು ಕಿಮ್ಮತ್ತು.	ಜಮೀನು. ಜಮೀನಿನ ನಂಬರ್ ಅಥವಾ ಪಟ್ಟಾ ಹೆಸರು.	ಮಿಶ್ರಿಸಿ ತರೀ ಅಥವಾ ಖುಷ್ಕಿ ಭಾಗಾ ಯಿತು.	ವಿಸ್ತೀರ್ಣ.	ಆಕಾರ.	ಸರ್ಕಾರಕ್ಕೆ ಬರಬೇಕಾದ ಸೋಸ್ತಿನ ಪಟ್ಟಿಗೆ ಸೇರಿದ ಬಾಕಿ ಮೊಬಲಗು.
					ರೂ.			ಎ. ಗು.	ರೂ. ಅ. ಪೈ.	ರೂ. ಅ. ಪೈ.
ತರೀಕೆರೆ.	ಲಿಂಗದಹಳ್ಳಿ.	ತಿಗಡೆ	ಮೆ॥ ಹೆನ್ರಿಕೋರ್ಡಲಿಸ್.			6.	ತರಿ ...	6 14	16 0 0	97 7 6 (1903—04)
						7	ಡಿಟೋ ...	3 25	9 8 0	106 15 9 (1904—05)
						8	ಡಿಟೋ ...	6 1	15 0 0	97 7 6 (1905—06)
				...	...	16	ಡಿಟೋ ...	5 36	13 0 0	1 0 0 ಪ್ರೊ. ಫೀ.
						17	ಡಿಟೋ ...	6 17	15 0 0	26 9 0 ಬಡ್ಡಿ.
						42	ಕಾಫಿ ...	16 17	24 12 0	1906ನೆ ಇಸವಿ
						43	ಡಿಟೋ ...	3 22	5 8 0	ನವಂಬರು ಆಖೈರ ವರಿಗೆ.
						48	ಡಿಟೋ ...	7 8	11 0 0	
								55 20	109 12 0	329 7 9

ಎಂ. ಲಕ್ಷ್ಮಣ ಶಾಸ್ತ್ರಿ,
ಫಾರ್ ಡೆಪ್ಯೂಟಿ ಕಮಿಷನರ್.